**ದಿನಾಂಕ: 05.04.2021 ರಂದು 10–30 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್–177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

**: ಚರ್ಚೆಯಾದ ವಿಷಯಗಳು :**

1. ವಾಡ್–177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್–19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

**: ಸಭೆಗೆ ಹಾಜರಾಗಿದ್ದವರ ವಿವರಗಳು :**

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 177ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್ಬಿ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ಬೆಸ್ಕಾಂ ಅಧಿಕಾರಿಗಳು |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| ಸದಸ್ಯರುಗಳು | ಮಾರ್ಷಲ್ |
| ಸಾರ್ವಜನಿಕರು | ಶ್ವೇತಾ .ಎಸ್ WOW GROUP (WOW) |
| ಸಾರ್ವಜನಿಕರು | ಶಕೀಲಾ ಭಾನು RWA- WOW GROUP |

**:ನಡಾವಳಿಯ ವರದಿ:**

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ಕೋವಿಡ್ ವ್ಯಾಕ್ಸಿನ್ ನೀಡುವ ಸಂಬಂಧ ಚರ್ಚಿಸಲಾಯಿತು.
- ಕೋವಿಡ್19 ಟೆಸ್ಟಿಂಗ್‌ಗಳನ್ನು ಹೆಚ್ಚಾಗಿ ಮಾಡಲು ಆರೋಗ್ಯ ಪರಿವೀಕ್ಷಕರಿಗೆ ನಿರ್ದೇಶನ ನೀಡಲಾಯಿತು.
- ಎಲ್ಲಾ ಪೌರ ಕಾರ್ಮಿಕರುಗಳಿಗೆ ಕೋವಿಡ್–19 ವ್ಯಾಕ್ಸಿನ್ ನೀಡಲು ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.

ಮು.ತಿ.ನೋ

- Dry Waste Collection Center ಬಳಿ Dry Waste ಹೆಚ್ಚಾಗಿದ್ದು, ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ಸಂಬಂಧ ಕೂಡಲೇ ತೆರವುಗೊಳಿಸಲು ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.

- 9ನೇ ಅಡ್ಡರಸ್ತೆಯಲ್ಲಿರುವ ಅನಧಿಕೃತ ಒತ್ತುವರಿಯನ್ನು ತೆರವುಗೊಳಿಸುವ ಬಗ್ಗೆ ಕಾಮಗಾರಿ ಇಲಾಖೆಗೆ ಸೂಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 10.30 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ರಾಮು .ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

Nagaraj .7

**ಅಧ್ಯಕ್ಷರು**
**ವಾರ್ಡ್ ಸಮಿತಿ, ವಾರ್ಡ್ ನಂ. 177**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**